15

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಕೆ ಅಬ್ದುಲ್ ಜಬ್ಬರ್**
**(ವಿಧಾನ ಸಭೆಯಿಂದ ಚುನಾಯಿತರಾದವರು)**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 522**

**ಉತ್ತರಿಸಬೇಕಾದ ದಿನಾಂಕ : 11-12-2025**

**ಉತ್ತರಿಸಬೇಕಾದ ಸಚಿವರು : ಸನ್ಮಾನ್ಯ ಮುಖ್ಯಮಂತ್ರಿಗಳು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನಲ್ಲಿ ನಕಲಿ ನಂದಿನಿ ತುಪ್ಪ ಮಾರಾಟ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಬಂದಿದ್ದಲ್ಲಿ, ಸರ್ಕಾರದ ಒಂದು ಭಾಗವಾಗಿರುವ ನಂದಿನಿ ಉತ್ಪನ್ನಗಳನ್ನು ಈ ರೀತಿ ನಕಲಿ ಮಾಡಿ ಮಾರಾಟ ಮಾಡುತ್ತಿರುವವರನ್ನು ಭೇದಿಸಲು ಸರ್ಕಾರ ಯಾವ ರೀತಿಯ ಕಾರ್ಯಾಚರಣೆ ನಡೆಸುತ್ತಿದೆ; | ಕರ್ನಾಟಕ ಹಾಲು ಮಹಾಮಂಡಳದ ವತಿಯಿಂದ ಅನಿರೀಕ್ಷಿತವಾಗಿ ಮಾರುಕಟ್ಟೆಗೆ ಭೇಟಿ ನೀಡಿ ಮಾರುಕಟ್ಟೆಯಲ್ಲಿರುವ ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳ ಮಾದರಿಗಳನ್ನು ಪಡೆದು, ಕರ್ನಾಟಕ ಹಾಲು ಮಹಾಮಂಡಳದ ಗುಣಭರವಸೆ ಪ್ರಯೋಗಾಲಯದಲ್ಲಿ ಪರೀಕ್ಷೆಗೆ ಒಳಪಡಿಸಿ, ಗುಣಮಟ್ಟವನ್ನು ಖಾತರಿಪಡಿಸಿಕೊಳ್ಳಲಾಗುತ್ತಿರುತ್ತದೆ.<br><br>ಕರ್ನಾಟಕ ಹಾಲು ಮಹಾಮಂಡಳದಿಂದ "**ಕೇಂದ್ರೀಯ ಜಾಗೃತ ದಳ**" ವಿಭಾಗದ ಅಧಿಕಾರಿಗಳ ತಂಡದಿಂದ ಅನಿರೀಕ್ಷಿತವಾಗಿ ಮಾರುಕಟ್ಟೆಯಲ್ಲಿ ನಿರಂತರವಾಗಿ ಕಾರ್ಯಾಚರಣೆ ನಡೆಸಲಾಗುತ್ತಿದೆ. |
| ಇ) | ಕರ್ನಾಟಕ ಹಾಲು ಮಂಡಳಿಯ ಲೈಸೆನ್ಸ್ ಇಲ್ಲದೇ ಈ ರೀತಿಯ ನಕಲಿ ಉತ್ಪನ್ನಗಳನ್ನು ಮಾರಾಟ ಮಾಡಲಾಗುತ್ತಿದೆಯೇ: | ಕರ್ನಾಟಕ ಹಾಲು ಮಂಡಳಿಯ ಪರವಾನಿಗೆ ಪಡೆದ ಅಧಿಕೃತ ಮಾರಾಟಗಾರರಿಗೆ ಮಾತ್ರ ನಂದಿನಿ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶವಿರುತ್ತದೆ. |
| ಈ) | ಇಂತಹ ನಕಲಿ ಉತ್ಪನ್ನಗಳನ್ನು ಸೇವಿಸುವುದರಿಂದ ಗ್ರಾಹಕರ ಹಾಗೂ ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವುದಿಲ್ಲವೇ; | ನಕಲಿ ಉತ್ಪನ್ನಗಳನ್ನು ಸೇವಿಸುವುದರಿಂದ ಗ್ರಾಹಕರ ಹಾಗೂ ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಂಭವವಿರುತ್ತದೆ. |

| | | |
|---|---|---|
| ಉ) | ಈ ರೀತಿಯ ನಂದಿನಿ ಉತ್ಪನ್ನಗಳ ತಯಾರಿಕೆ ಮತ್ತು ಮಾರಾಟವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕಠಿಣ ಕ್ರಮಗಳಾವುವು? | ಕರ್ನಾಟಕ ಹಾಲು ಮಹಾಮಂಡಳದ ವತಿಯಿಂದ ಅನಿರೀಕ್ಷಿತವಾಗಿ ಮಾರುಕಟ್ಟೆಗೆ ಭೇಟಿ ನೀಡಿ ಮಾರುಕಟ್ಟೆಯಲ್ಲಿರುವ ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳ ಮಾದರಿಗಳನ್ನು ಪಡೆದು, ಕರ್ನಾಟಕ ಹಾಲು ಮಹಾಮಂಡಳದ ಗುಣಭರವಸೆ ಪ್ರಯೋಗಾಲಯಗಳಲ್ಲಿ ಪರೀಕ್ಷೆಗೆ ಒಳಪಡಿಸಿ, ಗುಣಮಟ್ಟವನ್ನು ಖಾತರಿ ಪಡಿಸಿಕೊಳ್ಳಲಾಗುತ್ತಿರುತ್ತದೆ. ಕರ್ನಾಟಕ ಹಾಲು ಮಹಾಮಂಡಳದಿಂದ ಮಾರುಕಟ್ಟೆ ವಿಭಾಗ ಹಾಗೂ ಕೇಂದ್ರೀಯ ಜಾಗೃತ ದಳದ ವಿಭಾಗದ ತಂಡದೊಂದಿಗೆ ನಿರಂತರ ಕಾರ್ಯಾಚರಣೆ ನಡೆಸಲಾಗುತ್ತಿದೆ.<br><br>ಸರ್ಕಾರದ ಆರೋಗ್ಯ ಇಲಾಖೆಯಡಿ ಬರುವ FSSAI ರವರು ನಿರಂತರವಾಗಿ ಮಾರುಕಟ್ಟೆ ಪ್ರದೇಶಗಳಿಗೆ ಭೇಟಿ ನೀಡಿ ಉತ್ಪನ್ನಗಳ ಮಾದರಿಗಳನ್ನು ಸಂಗ್ರಹಿಸಿ, ಪರೀಕ್ಷೆಗೊಳಪಡಿಸಿ ಖಾತ್ರಿ ಮಾಡಿಕೊಂಡು ನಕಲಿ ಉತ್ಪನ್ನಗಳು ಕಂಡುಬಂದಲ್ಲಿ, ಸಂಬಂಧಿಸಿದವರ ವಿರುದ್ಧ ನಿಯಮಾನುಸಾರ ಕ್ರಮವಿಡುವ ಪರಿಪಾಠವಿರುತ್ತದೆ. |

**ಸಂಖ್ಯೆ: ಸಿಒ 217 ಸಿಸಿಬಿ 2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ